ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**<u>ಸಿ.ಸಿ. ಸಂಖ್ಯೆ: 100/2024</u>**

ಪ್ರ.ವ.ಬೋ.ತಾಃ 24-06-2026

ಚಾಸಾಃ 6 ಪ್ರಾಸಾಃ 5

| | |
|---|---|
| ಸಾಕ್ಷಿಯ ಹೆಸರು | ಕೆ.ನರಸಿಂಹಪ್ಪ |
| ತಂದೆ/ಗಂಡನ ಹೆಸರು | ಕಾವಲಪ್ಪ |
| ವಯಸ್ಸು | 74 ವರ್ಷ |
| ವೃತ್ತಿ | ವ್ಯವಸಾಯ |
| ವಾಸ | ಗುಟ್ಟೆ, ಮಧುಗಿರಿ ತಾ. |

**<u>ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-</u>**

ಈಗ ತೋರುತ್ತಿರುವ ಸ್ಥಳ ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ.2 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಅದಕ್ಕೆ ನಾನು ದಿಃ 22.04.2024 ರಂದು ಚಾಸಾ.1ರವರ ನಿವೇಶನದ ಹತ್ತಿರ ಸಹಿ ಮಾಡಿರುತ್ತೇನೆ. ಆ ಸಮಯದಲ್ಲಿ ನನ್ನ ಜೊತೆ ಚಾಸಾ.2 ಮತ್ತು 5ರವರು ಇದ್ದರು. ಆಗ ಸಮಯ ಬೆಳಗ್ಗೆ 10.30 ರಿಂದ 11.00 ಗಂಟೆ ಆಗಿತ್ತು.

**<u>ಪಾಟೀ ಸವಾಲುಃ</u>- ಆರೋಪಿತರ ಪರವಾಗಿ ಶ್ರೀ.ಎಸ್.ಆರ್.ಆರ್. ವಕೀಲರಿಂದಃ-**

ಆ ಸ್ಥಳ ಪಂಚನಾಮೆಯಲ್ಲಿ ಬರೆದಿರುವ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಆ ದಿನ ಪೊಲೀಸರು ಸ್ಥಳಕ್ಕೆ ಬಂದಿಲ್ಲ, ಯಾವುದೇ ಸ್ಥಳ ಪಂಚನಾಮೆ

ಮಾಡಿಲ್ಲ ಮತ್ತು ನಾನು ಆ ದಾಖಲೆಗೆ ಸಹಿ ಮಾಡಿಲ್ಲ ಎಂದರೆ ಸರಿಯಲ್ಲ. ಆ ದಾಖಲೆಗೆ ನನ್ನ ಜೊತೆ ಬೇರೆ ಯಾರು ಸಹ ಸಹಿ ಮಾಡಿಲ್ಲ ಎಂದರೆ ಸರಿಯಲ್ಲ. ಆ ದಾಖಲೆಗೆ ನಾನು ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ